# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂ. 190-ಮಂಗಮ್ಮನಪಾಳ್ಯ, ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಅಧ್ಯಕ್ಷರು/ನೋಡಲ್ ಅಧಿಕಾರಿ, ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 17.04.2021 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ರಲ್ಲಿ ನಡೆಸಿದ್ದ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಉಪಸ್ಥಿತರು:**

**ಹಾಜರಿದ್ದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ಕಾರ್ಯದರ್ಶಿ, ಸದ್ಯಸರುಗಳು, ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಹನುಮಂತರಾಯ ಟಿ. | ಅಧ್ಯಕ್ಷರು/ ನೋಡಲ್ ಅಧಿಕಾರಿಗಳು |
| 2 | ಶ್ರೀ ಕೆ.ಎಸ್. ರಾಮೇಗೌಡ | ಕಾರ್ಯದರ್ಶಿ, ಸಹಾಯಕ ಅಭಿಯಂತರರು ವಾರ್ಡ್ ಸಂ.190 |
| 3 | ಶ್ರೀ ಉಮೇಶ್ ಎಸ್. | ಸದಸ್ಯರು |
| 4 | ಶ್ರೀ ಗೋಪಿನಾಥ | ಸದಸ್ಯರು |
| 5 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು |
| 6 | ಶ್ರೀ ಚಂದ್ರ ರೆಡ್ಡಿ | ಸದಸ್ಯರು |
| 6 | ಶ್ರೀ ವಿಜಯಕುಮಾರ್ | ಕಿರಿಯ ಅಭಿಯಂತರರು, ಬೆಸ್ಕಾಂ |
| 7 | ಶ್ರೀ ನಟರಾಜ ಬಿ.ಸಿ | ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾಟರ್ ಇನ್ಸ್‌ಪೆಕ್ಟರ್ |
| 8 | ಶ್ರೀ ಹೊನ್ನುರ ಬಾಷ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 9 | ಶ್ರೀ ನಾರಾಯಣಪ್ಪ | ತೋಟಗಾರಿಕೆ ನಿರ್ವಹಣೆ |

ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ಕೋವಿಡ್-19 ಇರುವ ಪ್ರಯುಕ್ತ ಜನ ಸಾಂದ್ರತೆ ಕಡಿಮೆ ಮಾಡಿ ರೋಗ ಹರಡದಂತೆ ಕ್ರಮವಹಿಸಲು ಬೆಳಿಗ್ಗೆ 10.30 ರಿಂದ 11.30ರ ವರೆಗೆ ಸಾರ್ವಜನಿಕರ ಸಭೆ ಕರೆದು, ಸಾರ್ವಜನಿಕರ ಕುಂದು ಕೊರತೆಗಳ ಮನವಿಗಳು/ ಅವಹಾಲುಗಳನ್ನು ಸ್ವೀಕರಿಸಲಾಯಿತು. ಹಾಗೂ ಸಭೆಯಲ್ಲಿ ಸಮಸ್ಯೆಗಳ ಬಗ್ಗೆ ಚರ್ಚಿಸಿ ಕೆಲವು ಸಾಮಾನ್ಯ ಸಮಸ್ಯೆಗಳನ್ನು ಸ್ಥಳ ಪರಿವೀಕ್ಷಣೆ ಮಾಡಿ ಕ್ರಮ ಕೈಗೊಳ್ಳಲಾಗುವುದೆಂದು ನೋಡಲ್ ಅಧಿಕಾರಿಗಳು ಹಾಜರಿದ್ದ ಸಾರ್ವಜನಿಕರಿಗೆ ತಿಳಿಸಿದರು. ಮುಂದುವರೆದಂತೆ 11.30 ರಿಂದ ವಾರ್ಡ್ ಸದಸ್ಯರ ಮತ್ತು ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳು ಸ್ವಾಗತಿಸುತ್ತಾ ಸಭೆಯನ್ನು ಮುಂದುವರೆಸಿದರು.

ಸಭೆಗೆ ಗೈರು ಹಾಜರಾದ ಕಂದಾಯ ಇಲಾಖೆ ಸಹಾಯಕ ಕಂದಾಯ ಅಧಿಕಾರಿ ಶ್ರೀಮತಿ ಲಕ್ಷ್ಮೀ, ರಮೇಶ್ ಸಹಾಯಕ ಅಭಿಯಂತರರು (ವಿದ್ಯುತ್) ಬೊಮ್ಮನಹಳ್ಳಿ, ಶ್ರೀ ಮಹೇಶ್ ಅರಣ್ಯ ವಲಯ ಅಧಿಕಾರಿ, ಸಹಾಯಕ ನಿರ್ದೇಶಕರು ಪಶುಸಂಗೋಪನೆ ಇಲಾಖೆ ಬೊಮ್ಮನಹಳ್ಳಿ ವಲಯ, ಸಾಹಿಬಣ್ಣ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಸಭೆಗೆ ಗೈರು ಹಾಜರಾಗಿರುವುದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಮತ್ತು ವಾರ್ಡ್ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿ ಕೂಡಲೇ ಕಾರಣ ಕೇಳಿ ನೋಟಿಸ್ ನೀಡಲು ಸೂಚಿಸಿರುವ ಹಿನ್ನಲೆಯಲ್ಲಿ ಮೇಲಿನ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನ್ನು ನೋಡಲ್ ಅಧಿಕಾರಿಗಳು ಜಾರಿ ಮಾಡಿರುತ್ತಾರೆ.

Scanned with

ಮುಂದುವರೆದು, ಸಭೆಯು ಹಾಜರಿದ್ದ ಅಧಿಕಾರಿಗಳೊಡನೆ ಚರ್ಚಿಸಿ ಈ ಕೆಳಕಂಡಂತೆ ವಾರ್ಡಿನ ಸಮಸ್ಯೆಗಳು ಚರ್ಚಿಸಲಾಯಿತು.

| ಕ್ರ ಸಂ | ಇಲಾಖೆ | ವಿಷಯ |
|---|---|---|
| 1 | **ಘನತ್ಯಾಜ್ಯ (ಆರೋಗ್ಯ) ಇಲಾಖೆ** | • ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ಮಾಂಸದ ಅಂಗಡಿಗಳ ತ್ಯಾಜ್ಯವನ್ನು ವಿಲೇವಾರಿ ಮಾಡಲು ಗುತ್ತಿಗೆದಾರರಿಗೆ ವಹಿಸಲಾಗಿದೆ, ಗುತ್ತಿಗೆದಾರರು ತ್ಯಾಜ್ಯವನ್ನು ವಿಲೇವಾರಿ ಮಾಡಿ ಗೊಬ್ಬರ ತಯಾರಿಸಲು ಉಪಯೋಗಿಸುತ್ತಿದ್ದಾರೆಂದು ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿರುತ್ತಾರೆ. ಮುಂದಿನ ಸಭೆಗೆ ಗುತ್ತಿಗೆದಾರರಿಗೆ ಹಾಜರಾಗಲು ಅಧ್ಯಕ್ಷರು/ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.<br>• ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ಸದ್ಯಕ್ಕೆ ಸೊಳ್ಳೆ ಔಷದಿ ಸಿಂಪಡನೆ ಕಾರ್ಯವು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ, ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆಯ ಪ್ರಯುಕ್ತ ವಾರ್ಡ್ ವ್ಯಾಪ್ತಿಯಲ್ಲಿ ಔಷದಿ ಸಿಂಪಡನೆ ಮಾಡಲಾಗುತ್ತಿದ್ದು, ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯ ಕೆ.ಸಿ.ಡಿ.ಸಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸೊಳ್ಳೆ ಹೆಚ್ಚಾಗುತ್ತಿದ್ದು, ಕೆ.ಸಿ.ಡಿ.ಸಿ ಸಂಸ್ಥೆ ರವರಿಂದ ಸೊಳ್ಳೆ ಔಷದಿ ಸಿಂಪಡನೆ ಮಾಡಲು ಸೂಚಿಸುವಂತೆ ಸದ್ಯಸರು ಕೋರಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.<br>• **ಕ್ರಮ : ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು,** |
| 2 | **ಬಿ.ಡಬ್ಲ್ಯೂ.ಎಸ್.ಎಸ್.ಬಿ** | • ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ, ಇಂದಿನ ಸಭೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಅಭಿಯಂತರರು ಗೈರು ಹಾಜರಾಗಿದ್ದು, ಅವರ ಪರವಾಗಿ ವಾಟರ್ ಇನ್ಸ್‌ಪೆಕ್ಟರ್ ರವರ ಸಭೆಯಲ್ಲಿ ಹಾಜರಿದ್ದು, ಅನಧಿಕೃತವಾಗಿ ಕಲ್ಪಿಸಿಕೊಂಡಿರುವ ಕುಡಿಯುವ ನೀರಿನ ಸಂಪರ್ಕಗಳನ್ನು ತೆರವುಗೊಳಿಸಿರುವ ಛಾಯಾಚಿತ್ರವನ್ನು ಸಭೆಗೆ ಸಲ್ಲಿಸಿರುತ್ತಾರೆ. ಆದರೆ ಛಾಯಾಚಿತ್ರಗಳಲ್ಲಿ ನಿಖರವಾದ ವಿಳಾಸ ಮತ್ತು ದಿನಾಂಕಗಳು ಇರುವುದಿಲ್ಲ ಈ ಬಗ್ಗೆ ಅಧ್ಯಕ್ಷಕರು ಮುಂದಿನ ಸಭೆಯಲ್ಲಿ ಜಿಯೊ-ಟ್ಯಾಗ್ ಛಾಯಾಚಿತ್ರಗಳೊಂದಿಗೆ ವರದಿಯನ್ನು ಸಲ್ಲಿಸಲು ಸೂಚಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಸ್ಥೆಯವರಿಂದ ಪೈಪ್ ಲೈನ್ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಿರುವ, ಸ್ಥಳಗಳಲ್ಲಿ ಮಣ್ಣು/ಅವಶೇಷಗಳನ್ನು ಸ್ಥಳದಲ್ಲೇ ಬಿಟ್ಟಿರುತ್ತಾರೆ, ಇದ್ದರಿಂದ ಸಾರ್ವಜನಿಕರಿಗೆ ಓಡಾಡಲು ಕಷ್ಟಕರವಾಗುತ್ತಿದ್ದು, ಆದ್ದರಿಂದ ಸದರಿ ರಸ್ತೆಗಳಲ್ಲಿ ಬಿಟ್ಟಿರುವ ಅವಶೇಷಗಳು ತೆಗೆದು ಮತ್ತು ವೆಟ್‌ಮಿಕ್ಸ್ ಅಳವಡಿಸಿ ರಸ್ತೆ ದುರಸ್ಥಿ ಪಡಿಸುವಂತೆ ಸದಸ್ಯರು ಕೋರಿರುತ್ತಾರೆ.<br>• ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು/ನೋಡಲ್ ಅಧಿಕಾರಿಗಳು ಹಾಜರಿದ್ದ ಶ್ರೀ ನಟರಾಜ ವಾಟರ್ ಇನ್ಸ್‌ಪೆಕ್ಟರ್ ರವರಿಗೆ ಸೂಚಿಸಿರುತ್ತಾರೆ.<br>**ಕ್ರಮ : ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ** |

Scanned with

| ಕ್ರ ಸಂ | ಇಲಾಖೆ | ವಿಷಯ |
|---|---|---|
| 3 | ತೋಟಗಾರಿಕೆ | • ವಾರ್ಡ್ ವ್ಯಾಪ್ತಿಯಲ್ಲಿ ಉದ್ಯಾನವನಗಳಲ್ಲಿ ಸಮರ್ಪಕವಾಗಿ ಬೋರ್‌ವೆಲ್‌ಗಳು ಕಾರ್ಯನಿರ್ವಹಿಸುತ್ತಿದ್ದಯೇ ಹಾಗೂ ಗಿಡಗಳಿಗೆ ನೀರನ್ನು ಪೂರೈಸಲು ನೀರು ಇದೆಯೇ ಎಂದು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಅತಿಜೂರುರಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಂಬಂಧಪಟ್ಟವರಿಗೆ ಅಧ್ಯಕ್ಷಕರು/ನೋಡಲ್ ಅಧಿಕಾರಿ ರವರು ಹಾಜರಿದ್ದ ಶ್ರೀ ನಾರಾಯಣಪ್ಪ ತೋಟಗಾರಿಕೆ ನಿರ್ವಾಹಕರು ರವರಿಗೆ ಸೂಚಿಸಿರುತ್ತಾರೆ.<br>ಕ್ರಮ : ತೋಟಗಾರಿಕೆ ಅಧ್ಯಕ್ಷಕರು |

ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

17/4/21

ಕಾರ್ಯದರ್ಶಿ, ವಾರ್ಡ್ ನಂ.190ರ
ಸಹಾಯಕ ಅಭಿಯಂತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು/ನೋಡಲ್ ಅಧಿಕಾರಿ ವಾರ್ಡ್ ನಂ.190
ಮಂಗಮ್ಮನಪಾಳ್ಯ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1. ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ
2. ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ.ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ
4. ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
6. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
7. ಕಛೇರಿ ಪ್ರತಿ.

Scanned with